1055 ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಮತ್ತು ಯಾವುವು;

ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಿಗೆ ಬಿಡುಗಡೆ ಮಾಡಿರುವ ಮೊತ್ತವೆಷ್ಟು; (ವರ್ಷ ಮತ್ತು ವಿಶ್ವವಿದ್ಯಾಲಯವಾರು ವಿವರಗಳನ್ನು ನೀಡುವುದು)

ಇ) ರಾಯಚೂರು ಕೃಷಿ ವಿಶ್ವವಿದ್ಯಾಲಯವು ಯಾವಾಗ ಪ್ರಾರಂಭಗೊಂಡಿತು?

ಈ) ಪ್ರಾರಂಭವಾದಾಗಿನಿಂದ ಈವರೆಗೆ ನೀಡಿರುವ ಅನುದಾನದ ಮೊತ್ತವೆಷ್ಟು, (ವಿವರಗಳನ್ನು ನೀಡುವುದು);

ಉ) ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಮೂಲಭೂತ ಸೌಲಭ್ಯವನ್ನು ಒದಗಿಸಲಾಗಿದೆಯೇ;

ಊ) ಇಲ್ಲದಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು)

ಅ) ಮೂರು ಕೃಷಿ ವಿಶ್ವವಿದ್ಯಾಲಯಗಳಿವೆ, ಅವುಗಳೆಂದರೆ:--

1) ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು
2) ಕೃಷಿ ವಿಶ್ವವಿದ್ಯಾಲಯ, ಧಾರವಾಡ
3) ಕೃಷಿ ವಿಶ್ವವಿದ್ಯಾಲಯ, ರಾಯಚೂರು

ಆ)

ಕೃವಿವಿ	2006–07	2007–08	2008–09
ಬೆಂಗಳೂರು			
ಯೋಜನೆ	3400.00	4900.00	2693.00
ಯೋಜನೇತರ	3687.31	5584.80	5526.55
ಧಾರವಾಡ			
ಯೋಜನೆ	2600.00	3400.00	2343.80

ಯೋಜನೇತರ	3853.71	4507.86	5139.74
ರಾಯಚೂರು			
ಯೋಜನೆ	–	–	400.00
ಯೋಜನೇತರ	–	–	–

ಇ) ದಿನಾಂಕ 22–11–2008ರಿಂದ ಅಸ್ತಿತ್ವಕ್ಕೆ ಬಂದಿದ್ದರೂ ಆರ್ಥಿಕ ಮತ್ತು ಆಡಳಿತಾತ್ಮಕವಾಗಿ ದಿನಾಂಕ 1–4–2009ರಿಂದ ಕಾರ್ಯನಿರ್ವಹಿಸುತ್ತಿದೆ.

ಈ) 2008–09ನೇ ಸಾಲಿನಲ್ಲಿ 400.00 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಿದೆ. 2009–10ನೇ ಸಾಲಿಗೆ 2564.00 ಲಕ್ಷ ರೂಪಾಯಿಗಳನ್ನು ನಿಗದಿಪಡಿಸಿದ್ದು, ಅದರ ಪೈಕಿ ಈವರೆಗೆ 540.00 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಿರುತ್ತದೆ.

ಉ, ಊ) 2008–09ನೇ ಸಾಲಿನಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಸ್ತಿತ್ವಕ್ಕೆ ಬಂದಿದ್ದು, ಇದಕ್ಕೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

1185 ಶ್ರೀ ನಾಡಗೌಡ ವೆಂಕಟರಾವ್ ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಹಕಾರ ಸಂಘಗಳಲ್ಲಿ ಆಡಳಿತ ಮಂಡಳಿಯ ಚುನಾವಣೆ ಪ್ರಕ್ರಿಯೆ ಜಾರಿಯಲ್ಲಿರುವಾಗ ಆಡಳಿತ ಮಂಡಳಿಗಳು ಮಹತ್ತರ ತೀರ್ಮಾನಗಳನ್ನು ತೆಗೆದುಕೊಳ್ಳಬಹುದೇ; ಸರ್ಕಾರದಿಂದ ಇಂತಹ ತೀರ್ಮಾನಗಳನ್ನು ತೆಗೆದುಕೊಳ್ಳುವಂತೆ ಸೂಚನೆಗಳನ್ನು ನೀಡಲಾಗಿದೆಯೇ;

ಆ) ಇಂತಹ ತೀರ್ಮಾನಗಳನ್ನು ಅನುಷ್ಠಾನಕ್ಕೆ ತರಬಹುದೇ;

ಇ) ಇದರಿಂದ ಸಹಕಾರಿ ಸಂಘಗಳಿಗೆ ನಷ್ಟವಾದಲ್ಲಿ ಜವಾಬ್ದಾರರು ಯಾರು;

ಈ) ಇಂತಹ ವಿಷಯಗಳಿಗೆ ಸಂಬಂಧಿಸಿದಂತೆ ಸಹಕಾರ ಇಲಾಖೆಯಿಂದ ಮಾರ್ಗಸೂಚಿಗಳನ್ನು ನೀಡಲಾಗಿದೆಯೇ; ಹಾಗಿದ್ದಲ್ಲಿ, ಅದರ ಪ್ರತಿ ಒದಗಿಸುವುದು?

ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಸಹಕಾರ ಸಚಿವರು)